**All India Radio: Bangalore**
**Regional Bulletin In Kannada**
**26.08.2025 / 6.40 p.m.**
**ಆಕಾಶವಾಣಿ ಬೆಂಗಳೂರು**

**ಪ್ರದೇಶ ಸಮಾಚಾರ**

**<><><><>**

ಮುಖ್ಯಾಂಶಗಳು

1. ಗ್ರೇಟರ್ ಬೆಂಗಳೂರು ಪ್ರಾಧಿಕಾರಕ್ಕೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅಧ್ಯಕ್ಷರಾಗಿ ನೇಮಕ
2. ಅತ್ಯಾಧುನಿಕ ವೈದ್ಯಕೀಯ ಸೇವೆ ಒಡಂಬಡಿಕೆಗೆ ಬೆಳಗಾವಿ ವೈದ್ಯಕೀಯ ಸಂಶೋಧನಾ ಸಂಸ್ಥೆಯೊಂದಿಗೆ ಕೆಎಲ್ ಇ ಆಸ್ಪತ್ರೆ ಸಹಿ
3. ಅರಣ್ಯ ಸಂರಕ್ಷಣೆಗೆ ಕಪ್ಪತಗುಡ್ಡ ಅರಣ್ಯದಲ್ಲಿ ವೃಕ್ಷೋ ರಕ್ಷತೆ - ರಕ್ಷಿತಾ ವೃಕ್ಷಾ ಬಂಧನ ಅಭಿಯಾನ
4. ಜಾತಿ ಗಣತಿಯಲ್ಲಿ ಮುಸ್ಲಿಂ ಉಪಜಾತಿ ವರ್ಗೀಕರಿಸದ ಹಿನ್ನೆಲೆ - ಹಿಂದುಳಿದ ವರ್ಗದ ಆಯೋಗದ ವಿರುದ್ಧ ಬಿಜೆಪಿ ಅಸಮಾಧಾನ
5. ನಾಡಿನೆಲ್ಲೆಡೆ ನಾಳೆ ಗಣೇಶ ಹಬ್ಬದ ಸಂಭ್ರಮ - ಹುಬ್ಬಳ್ಳಿ ಸೇರಿದಂತೆ ರಾಜ್ಯದೆಲ್ಲೆಡೆ ಬಿಗಿ ಭದ್ರತೆ

<><><><>

ಗ್ರೇಟರ್ ಬೆಂಗಳೂರು ಅಸ್ತಿತ್ವಕ್ಕೆ ಬಂದಿದ್ದು, ರಾಜ್ಯ ಸರ್ಕಾರ, ಗ್ರೇಟರ್ ಬೆಂಗಳೂರು ಪ್ರಾಧಿಕಾರಕ್ಕೆ ಅಧ್ಯಕ್ಷರು, ಉಪಾಧ್ಯಕ್ಷ ಹಾಗೂ ಪದನಿಮಿತ್ತ ಸದಸ್ಯರನ್ನು ನೇಮಿಸಿದೆ. ಗ್ರೇಟರ್ ಬೆಂಗಳೂರು ಪ್ರಾಧಿಕಾರದ ಅಧ್ಯಕ್ಷರಾಗಿ ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ಉಪಾಧ್ಯಕ್ಷರಾಗಿ ಉಪಮುಖ್ಯಮಂತ್ರಿ ಡಿಕೆ ಶಿವಕುಮಾರ್ ಅವರನ್ನು ನೇಮಕ ಮಾಡಲಾಗಿದೆ. ಕೇಂದ್ರದಲ್ಲಿನ ಬೆಂಗಳೂರಿನ ಸಚಿವರು, ರಾಜ್ಯ ಸರ್ಕಾರದ ಬೆಂಗಳೂರಿನ ಸಚಿವರು, ನಗರದ ಸಂಸದರು, ಶಾಸಕರು ಹಾಗೂ ಎಂಎಲ್ ಸಿಗಳು ಪದನಿಮಿತ್ತ ಸದಸ್ಯರನ್ನಾಗಿ ನೇಮಿಸಲಾಗಿದೆ. ಮುಖ್ಯವಾಗಿ ವಿಧಾನ ಪರಿಷತ್ ಸದಸ್ಯ ಡಾ.ಯತೀಂದ್ರ ಸಿದ್ದರಾಮಯ್ಯ ಅವರನ್ನೂ ಸಹ ಗ್ರೇಟರ್ ಬೆಂಗಳೂರು ಪ್ರಾಧಿಕಾರದ ಸದಸ್ಯರನ್ನಾಗಿ ಮಾಡಲಾಗಿದೆ. ಈ ಪ್ರಾಧಿಕಾರದ ಅಡಿಯಲ್ಲಿ ಐದು ಪಾಲಿಕೆಗಳನ್ನು ರಚನೆ ಮಾಡಲಾಗಿದೆ. ಬೆಂಗಳೂರು ದಕ್ಷಿಣ ಮಹಾನಗರ ಪಾಲಿಕೆ, ಬೆಂಗಳೂರು ಉತ್ತರ ಮಹಾನಗರ ಪಾಲಿಕೆ, ಬೆಂಗಳೂರು ಕೇಂದ್ರ ಮಹಾನಗರ ಪಾಲಿಕೆ, ಬೆಂಗಳೂರು ಪಶ್ಚಿಮ ಮಹಾನಗರ ಪಾಲಿಕೆ, ಬೆಂಗಳೂರು ಪೂರ್ವ ಮಹಾನಗರ ಪಾಲಿಕೆಯನ್ನು ಪ್ರಾಧಿಕಾರ ಒಳಗೊಂಡಿದೆ.

<><><><>

ಬೆಳಗಾವಿಯ ವೈದ್ಯಕೀಯ ಸಂಶೋಧನಾ ಕೇಂದ್ರ ಮತ್ತು ಬೆಳಗಾವಿಯ ಬಿಮ್ಸ್ ಸೂಪರ್ ಸ್ಪೆಶಾಲಿಟಿ ಆಸ್ಪತ್ರೆ ಹಾಗೂ ಕೆಎಲ್ ಇ ಸಂಸ್ಥೆಯ ಡಾ. ಪ್ರಭಾಕರ ಕೋರೆ ಆಸ್ಪತ್ರೆ ಜೊತೆಗೂಡಿ ಅತ್ಯಾಧುನಿಕ ವೈದ್ಯಕೀಯ ಸೇವೆ ನೀಡುವ ಒಡಂಬಡಿಕೆಗೆ ಬಿಮ್ಸ್ ನಿರ್ದೇಶಕ ಡಾ ಅಶೋಕ ಕುಮಾರ ಶೆಟ್ಟಿ, ಕೋರೆ ಆಸ್ಪತ್ರೆಯ ವೈದ್ಯಕೀಯ ನಿರ್ದೇಶಕ ಡಾ. ಕರ್ನಲ್ ಎಂ ದಯಾನಂದ ಇಂದು ಬೆಳಗಾವಿಯಲ್ಲಿ ಸಹಿ ಹಾಕಿದರು. ಆರ್ಥಿಕವಾಗಿ ಹಿಂದುಳಿದಿರುವ ಹಾಗೂ ಗ್ರಾಮೀಣ ಭಾಗದ ಜನರಿಗೆ ಅತ್ಯಾಧುನಿಕ ವೈದ್ಯಕೀಯ ಸೌಲಭ್ಯವನ್ನು ಉಚಿತವಾಗಿ ನೀಡಲು ಅನುಕೂಲವಾಗುವಂತೆ ಕೆಎಲ್ಇ ಸಂಸ್ಥೆಯ ಡಾ. ಪ್ರಭಾಕರ ಕೋರೆ ಆಸ್ಪತ್ರೆಯು ಬಿಮ್ಸ್ ಆಸ್ಪತ್ರೆಯೊಂದಿಗೆ ಕೈಜೋಡಿಸಿದೆ. ಬಿಮ್ಸ್ ಆಸ್ಪತ್ರೆಯ ಸಹಕಾರದೊಂದಿಗೆ ಈ ಭಾಗದ ಜನರಿಗೆ ಉಚಿತ ಚಿಕಿತ್ಸೆ ನೀಡಲು ನಾವು ಉತ್ಸುಕರಾಗಿದ್ದೇವೆ. ಈಗಾಗಲೇ ಸುಮಾರು ೧ ಸಾವಿರದ ೪೦೦ ಹಾಸಿಗೆಗಳ ಮೂಲಕ ಆರ್ಥಿಕವಾಗಿ ಹಿಂದುಳಿದ ಜನರಿಗೆ ಸಂಪೂರ್ಣ ಉಚಿತವಾಗಿ ಚಿಕಿತ್ಸೆ ನೀಡಲಾಗುತ್ತಿದೆ. ಅದರೊಂದಿಗೆ ಇನ್ನೂ ಹೆಚ್ಚಿನ ಜನರಿಗೆ ಸೇವೆಯನ್ನು ನೀಡಲು ಈ ಒಡಂಬಡಿಕೆಯನ್ನು ಮಾಡಿಕೊಳ್ಳಲಾಗಿದೆ ಎಂದು ಬೀಮ್ಸ್ ನಿರ್ದೇಶಕ ಅಶೋಕ್ ಕುಮಾರ ಶೆಟ್ಟಿ ತಿಳಿಸಿದ್ದಾರೆ.

<><><><>

ಗದಗ ಜಿಲ್ಲೆಯ ಮುಂಡರಗಿ ತಾಲೂಕಿನ ಕಪ್ಪತ್ತಗುಡ್ಡದಲ್ಲಿ ಅರಣ್ಯ ಇಲಾಖೆ ಪರಿಸರ ಸಂರಕ್ಷಣೆಯ ನೂತನ ಕಾರ್ಯಕ್ರಮ ಆರಂಭಿಸಿದೆ. ಮುಂಡರಗಿ ವಲಯದ ಅರಣ್ಯಾಧಿಕಾರಿ ಮಂಜುನಾಥ್ ಮೇಗಳಮನಿ ಮಾರ್ಗದರ್ಶನದಲ್ಲಿ, 'ವೃಕ್ಷೋ ರಕ್ಷೇತೆ ? ರಕ್ಷಿತ ವೃಕ್ಷಾ ಬಂಧನ" ಎಂಬ ಅಭಿಯಾನ ಪ್ರಾರಂಭಿಸಲಾಗಿದೆ. ಪ್ರವಾಸಿಗರು ಕಪ್ಪತ್ತಗುಡ್ಡದ ಗಿಡಗಳಿಗೆ ರಾಖಿ ಕಟ್ಟುವ ಮೂಲಕ ಪ್ರಕೃತಿಯನ್ನು ಕಾಪಾಡುವ ಪ್ರತಿಜ್ಞೆ ಮಾಡಲಾಗುತ್ತಿದೆ. ಅರಣ್ಯ ಇಲಾಖೆ ವಿಶಿಷ್ಟವಾಗಿ ತಯಾರಿಸಿರುವ ಈ ರಾಖಿಗಳು ಪ್ಲಾಸ್ಟಿಕ್ ಮುಕ್ತವಾಗಿದ್ದು, ಕಪ್ಪತ್ತಗುಡ್ಡದಲ್ಲೇ ದೊರೆಯುವ ಸ್ಥಳೀಯ ಸಸ್ಯಗಳ ಬೀಜಗಳನ್ನು ಒಳಗೊಂಡಿವೆ. ಪ್ರವಾಸಿಗರು ಗಿಡಗಳಿಗೆ ಈ ರಾಖಿಗಳನ್ನು ಕಟ್ಟಿದ ನಂತರ, ಅವು ಕಾಲಕ್ರಮೇಣ ಒಣಗಿ ಬಿದ್ದಾಗ ಬೀಜಗಳು ನೆಲಕ್ಕೆ ಬಿದ್ದು ಹೊಸ ಸಸಿಗಳಾಗಿ ಬೆಳೆಯುತ್ತವೆ. ಅರಣ್ಯ ಇಲಾಖೆ ಅಧಿಕಾರಿಗಳ ಪ್ರಕಾರ, ಇಂತಹ ಕಾರ್ಯಕ್ರಮಗಳು ಮುಂದಿನ ದಿನಗಳಲ್ಲಿ ಜನರಲ್ಲಿ ಪರಿಸರ ಪ್ರೀತಿ ಮತ್ತು ಜಾಗೃತಿಯನ್ನು ಹೆಚ್ಚಿಸಿ, ಗಿಡಗಳನ್ನು ಕಾಪಾಡುವ ಜವಾಬ್ದಾರಿಯ ಭಾವನೆ ಮೂಡಿಸುವಲ್ಲಿ ಮಹತ್ತರ ಪಾತ್ರವಹಿಸಲಿವೆ.

<><><><>

ಜಾತಿ ಜನಗಣತಿಗಾಗಿ ಸಿದ್ಧಪಡಿಸಲಾದ ಜಾತಿ ಮತ್ತು ಉಪಜಾತಿ ಪಟ್ಟಿಯಲ್ಲಿ ಮುಸ್ಲಿಂ ಉಪಜಾತಿಗಳನ್ನು ವರ್ಗೀಕರಿಸದಿರುವುದನ್ನು ಬಿಜೆಪಿ ರಾಜ್ಯ ಹಿಂದುಳಿದ ವರ್ಗಗಳ

ಆಯೋಗವನ್ನು ಪ್ರಶ್ನಿಸಿದೆ. ಬೆಂಗಳೂರಿನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಬಿಜೆಪಿ ರಾಜ್ಯ ಪ್ರಧಾನ ಕಾರ್ಯದರ್ಶಿ,ಶಾಸಕ ವಿ. ಸುನೀಲ್ ಕುಮಾರ್, ೧ ಸಾವಿರದ ೪೦೦ ಜಾತಿಗಳ ಪಟ್ಟಿಯನ್ನು ಪರಿಶೀಲಿಸಿದಾಗ, ಮುಸ್ಲಿಮರು ಮತ್ತು ಮುಸ್ಲಿಂ ಉಪಜಾತಿಗಳನ್ನು ಸಂಪೂರ್ಣವಾಗಿ ಕೈಬಿಡಲಾಗಿದೆ ಎಂದು ತಿಳಿಸಿದ್ದಾರೆ. "ಜಾತಿ ಪಟ್ಟಿ ಮತ್ತು ಅನ್ವಯಿಸಲಾದ ಮಾನದಂಡಗಳ ಬಗ್ಗೆ ಸಾಕಷ್ಟು ಗೊಂದಲಗಳಿವೆ. ಆಯೋಗದ ಅಧ್ಯಕ್ಷರ ಪತ್ರಿಕಾ ಹೇಳಿಕೆಯ ಮೂಲಕ ಇದು ಬೆಳಕಿಗೆ ಬಂದಿದೆ. ಮುಂದಿನ ವಾರ, ಬಿಜೆಪಿ ನಿಯೋಗವು ಆಯೋಗವನ್ನು ಭೇಟಿ ಮಾಡಲಿದೆ ಎಂದು ಹೇಳಿದ್ದಾರೆ. ಯಾವುದೇ ಜಾತಿ ಅಥವಾ ಉಪ-ಜಾತಿಯನ್ನು ಬಿಟ್ಟಿದ್ದರೆ ಅಥವಾ ತಪ್ಪಾಗಿ ನಮೂದಿಸಿದ್ದರೆ, ಅಥವಾ ಪಟ್ಟಿಗೆ ಸಂಬಂಧಿಸಿದಂತೆ ಸಲಹೆಗಳಿದ್ದರೆ, ಸಾರ್ವಜನಿಕರು ಮತ್ತು ಸಂಘಟನೆಗಳು ಏಳು ದಿನಗಳಲ್ಲಿ ಆಕ್ಷೇಪಣೆಗಳನ್ನು ಸಲ್ಲಿಸಬಹುದು ಎಂದು ತಿಳಿಸಿದ್ದಾರೆ. ದಸರಾ ರಜಾದಿನಗಳಲ್ಲಿ ಸೆಪ್ಟೆಂಬರ್ ೨೨ ರಿಂದ ಅಕ್ಟೋಬರ್ ೭ ರವರೆಗೆ ೧೫ ದಿನಗಳವರೆಗೆ ಹೊಸದಾಗಿ ಸಾಮಾಜಿಕ ಮತ್ತು ಶೈಕ್ಷಣಿಕ ಸಮೀಕ್ಷೆಯನ್ನು ನಡೆಸಲು ರಾಜ್ಯ ಸರ್ಕಾರ ನಿರ್ಧರಿಸಿದೆ.

<><><><>

ರಾಜ್ಯದೆಲ್ಲೆಡೆ ಗೌರಿ-ಗಣೇಶ ಹಬ್ಬದ ಸಂಭ್ರಮ ಮನೆ ಮಾಡಿದೆ. ರಾಜಧಾನಿ ಬೆಂಗಳೂರಿನಲ್ಲೂ ಗೌರಿ-ಗಣೇಶ ಹಬ್ಬದ ಸಂಭ್ರಮ ಮನೆ ಮಾಡಿದೆ. ಗೌರಿ ಹಾಗೂ ಗಣೇಶನ ಮೂರ್ತಿ ಜತೆಗೆ ಜನರು ಹೂವು-ಹಣ್ಣು ಖರೀದಿಯಲ್ಲಿ ನಿರತರಾಗಿದ್ದಾರೆ. ಹುಬ್ಬಳ್ಳಿ ಧಾರವಾಡ ಸೆಂಟ್ರಲ್ ಕ್ಷೇತ್ರದ ಶಾಸಕ ಮಹೇಶ ತೆಂಗಿನಕಾಯಿ ಅಧಿಕಾರಿಗಳೊಂದಿಗೆ ಇಂದು ಸಭೆ ನಡೆಸಿದರು. ಸಭೆಯಲ್ಲಿ ಗಣಪತಿಯ ಆಗಮನದ ಹಾಗೂ ವಿಸರ್ಜನಾ ಮೆರವಣಿಗೆ, ಟ್ರಾಫಿಕ್ ನಿಯಂತ್ರಣ ಹಾಗೂ ಇತರ ವ್ಯವಸ್ಥೆಗಳನ್ನು ಕಲ್ಪಿಸುವ ಕುರಿತು ಚರ್ಚಿಸಿ, ಅಗತ್ಯ ಸಲಹೆ ಸೂಚನೆಗಳನ್ನು ನೀಡಿದರು. ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಹಬ್ಬದ ಸಂದರ್ಭದಲ್ಲಿ ಯಾವುದೇ ಅಹಿತಕರ ಘಟನೆ ನಡೆಯದಂತೆ ಈಗಾಗಲೇ ಅಧಿಕಾರಿಗಳ ಸಭೆ ನಡೆಸಿ ಸೂಚಿಸಲಾಗಿದೆ ಎಂದು ತಿಳಿಸಿದರು.

**ಧ್ವನಿ - ಟೆಂಗಿನ ಕಾಯಿ**

ಗೌರಿ ಗಣೇಶ ಹಬ್ಬ ಕೋಲಾರ ಜಿಲ್ಲೆಯಾದ್ಯಂತ ವಿಜೃಂಭಣೆಯಿಂದ ಜರುಗುತ್ತಿದ್ದು, ಎಲ್ಲೆಡೆ ಸಂಭ್ರಮ ಮನೆ ಮಾಡಿದೆ. ಪರಿಸರ ಸ್ನೇಹಿ ಗಣಪತಿ ಹಬ್ಬ ಆಚರಣೆಗೆ ಜಿಲ್ಲಾಡಳಿತ ಹೆಚ್ಚಿನ ನಿಗಾ ಇಟ್ಟಿದ್ದು, ಗಣಪತಿ ಮಾರಾಟ ಮಳಿಗೆಗಳಿಗೆ ಪುರಸಭೆ ಮುಖ್ಯಾಧಿಕಾರಿ ಸತ್ಯನಾರಾಯಣ ಅಧಿಕಾರಿಗಳೊಂದಿಗೆ ಭೇಟಿ ನೀಡಿ ಪರಿಶೀಲನೆ ನಡೆಸಿದರು. ನಮ್ಮ ನಡೆ ಹಸಿರಿನೆಡೆಗೆ - ಗ್ರೋ ಗ್ರೀನ್ ಅಭಿಯಾನದಡಿ ಗೌರಿ-ಗಣೇಶೋತ್ಸವ ಹಬ್ಬ ಆಚರಣೆ ಸಂದರ್ಭದಲ್ಲಿ ಪರಿಸರಕ್ಕೆ ಯಾವುದೇ ಧಕ್ಕೆಯಾಗದಂತೆ ಪರಿಸರ ಸ್ನೇಹಿ ನೈಸರ್ಗಿಕ ಜೇಡಿಮಣ್ಣಿನ ಗಣೇಶ ಮೂರ್ತಿಯನ್ನು ಸ್ಥಾಪಿಸುವ ಕುರಿತು ಕೊಡಗು ಜಿಲ್ಲೆಯ ವಿವಿಧ ಶಾಲೆಗಳಲ್ಲಿ ಜನ ಜಾಗೃತಿ ಮೂಡಿಸಲಾಯಿತು.

ಗೌರಿ ಗಣೇಶ ಮೂರ್ತಿ ಪ್ರತಿಷ್ಠಾಪನೆ ಮತ್ತು ವಿಸರ್ಜನೆ ಕಾಲಕ್ಕೆ ಶಾಂತಿ ಹಾಗೂ ಸುವ್ಯವಸ್ಥೆ ಕಾಪಾಡುವ ಹಿತದೃಷ್ಟಿಯಿಂದ ಎಲ್ಲ ತರಹದ ಮದ್ಯ ಮಾರಾಟ, ಸಂಗ್ರಹಣೆ ಹಾಗೂ ಹಂಚಿಕೆಯನ್ನು ನಿಷೇಧಿಸಿ ವಿಜಯಪುರ ಜಿಲ್ಲಾಧಿಕಾರಿ ಡಾ.ಆನಂದ ಆದೇಶ ಹೊರಡಿಸಿದ್ದಾರೆ.

<><><>

ಬೆಂಗಳೂರಿನ ನಿಮ್ಹಾನ್ಸ್ ನಲ್ಲಿ ೧೫ನೇ ಭಾರತೀಯ ಅಂಗದಾನ ದಿನಾಚರಣೆ ಆಚರಿಸಲಾಯಿತು. ನರ್ಸಿಂಗ್ ವಿಭಾಗ ಆಯೋಜಿಸಿದ್ದ ಜಾಗೃತಿ ಕಾರ್ಯಕ್ರಮದಲ್ಲಿ ೨ ಸಾವಿರಕ್ಕೂ ಹೆಚ್ಚು ಮಂದಿ ಭಾಗವಹಿಸಿದ್ದರು. ಮಾನವ ಜೀವಗಳನ್ನು ಉಳಿಸಲು ಅಂಗದಾನದ ಮಹತ್ವವನ್ನು ಕಾರ್ಯಕ್ರಮದಲ್ಲಿ ತಿಳಿಸಲಾಯಿತು. ತಜ್ಞರು ಅಂಗದಾನದ ಪ್ರಕ್ರಿಯೆ, ಕಾನೂನು ವಿಷಯಗಳ ಬಗ್ಗೆ ತಮ್ಮ ಅಭಿಪ್ರಾಯ ಹಂಚಿಕೊಂಡರು. ಎಂ.ಎಸ್‌ಸಿ ನರ್ಸಿಂಗ್ ವಿದ್ಯಾರ್ಥಿಗಳು ಅಂಗದಾನದ ಪ್ರಕ್ರಿಯೆ ಕುರಿತು ಪ್ರಸ್ತುತಪಡಿಸಿದ ನಾಟಕ ಪರಿಣಾಮಕಾರಿಯಾಗಿತ್ತು

<><><>

ವಿದ್ಯಾರ್ಥಿನಿಲಯಗಳು ಮಕ್ಕಳ ಶಿಕ್ಷಣಕ್ಕೆ ಪೂರಕವಾಗಿರಬೇಕು. ಈ ನಿಟ್ಟಿನಲ್ಲಿ ನಿರ್ಮಾಣ ಹಂತದಲ್ಲೇ ಅಗತ್ಯ ಕ್ರಮಗಳನ್ನು ಕೈಗೊಳ್ಳಬೇಕು ಎಂದು ಅಧಿಕಾರಿಗಳಿಗೆ ಗೃಹ ಸಚಿವ ಡಾ. ಜಿ. ಪರಮೇಶ್ವರ್ ಸೂಚನೆ ನೀಡಿದ್ದಾರೆ. ತುಮಕೂರು ನಗರದ ರೈಲ್ವೆ ನಿಲ್ದಾಣ ರಸ್ತೆಯಲ್ಲಿ ಶ್ರೀ ಡಿ. ದೇವರಾಜ ಅರಸು ಹಿಂದುಳಿದ ವರ್ಗಗಳ ಮೆಟ್ರಿಕ್ ನಂತರ ಬಾಲಕಿಯರ ವಿದ್ಯಾರ್ಥಿನಿಲಯ ನಿರ್ಮಾಣಕ್ಕೆ ಗೃಹ ಶಂಕುಸ್ಥಾಪನೆ ನೆರವೇರಿಸಿ ಮಾತನಾಡಿದ ಅವರು, ಈ ಹಾಸ್ಟೆಲ್ ನಿರ್ಮಾಣ ಕಾರ್ಯವನ್ನು ನಿಗದಿತ ಸಮಯದೊಳಗೆ ಪೂರ್ಣಗೊಳಿಸಬೇಕು ಎಂದು ಹೇಳಿದ್ದಾರೆ.

ನಬಾರ್ಡ್ ಯೋಜನೆಯಡಿ ೪ ಕೋಟಿ ರೂಪಾಯಿ ವೆಚ್ಚದಲ್ಲಿ ಹಾಸ್ಟೇಲ್ ನಿರ್ಮಾಣವಾಗುತ್ತಿದ್ದು ಕಾಮಗಾರಿ ಗುಣಮಟ್ಟದಿಂದ ಕೂಡಿರಬೇಕು ಎಂದು ತಾಕೀತು ಮಾಡಿದ್ದಾರೆ.

<><> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <><>